ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 — ಲಸಿಕೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 11/1/21

# ಮೊದಲ ಹಂತದಲ್ಲಿ 14 ಲಕ್ಷ ಡೋಸ್ ಲಸಿಕೆ

## ಡಾ. ಕೆ. ಸುಧಾಕರ್ ಮಾಹಿತಿ । ಲಸಿಕೆ ಸಂಗ್ರಹ ವ್ಯವಸ್ಥೆ ಪರಿಶೀಲಿಸಿದ ಸಚಿವ

11-1-2021

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯಕ್ಕೆ ಮೊದಲ ಹಂತದಲ್ಲಿ 13.90 ಲಕ್ಷ ಡೋಸ್ ಕೊರನಾ ಲಸಿಕೆ ಸಿಗಲಿದೆ ಎಂದು ಸಚಿವ ಡಾ.ಕೆ. ಸುಧಾಕರ್ ತಿಳಿಸಿದ್ದಾರೆ.

ಲಸಿಕೆ ಸಂಗ್ರಹಕ್ಕೆ ರಾಜ್ಯದಲ್ಲಿ ಸಕಲ ವ್ಯವಸ್ಥೆ ಮಾಡಿಕೊಂಡಿದ್ದು, ವಿತರಣೆ ಸಿದ್ಧತೆಯೂ ಪೂರ್ಣಗೊಂಡಿದೆ ಎಂದು ಲಸಿಕೆ ಸಂಗ್ರಹ ವ್ಯವಸ್ಥೆ ಪರಿಶೀಲಿಸಿದ ಬಳಿಕ ಸುದ್ದಿಗಾರರಿಗೆ ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಸೋಮವಾರ ಸಂಜೆ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವೀಡಿಯೋ ಸಂವಾದ ನಡೆಸಲಿದ್ದಾರೆ. ಈಗಾಗಲೇ ಪ್ರಧಾನಿಗಳು ಜ.16 ರಿಂದ ಕರೊನಾ ಲಸಿಕೆ ನೀಡುವ ಬಗ್ಗೆ ತಿಳಿಸಿದ್ದಾರೆ.

**» ಸಾರ್ವಜನಿಕರಲ್ಲಿ ವೃದ್ಧರು, ಅಶಕ್ತರಿಗೆ ಮೊದಲಿಗೆ ಲಸಿಕೆ**

ಆರೋಗ್ಯ ಕ್ಷೇತ್ರದ ಸಿಬ್ಬಂದಿಗೆ 3 ಕೋಟಿ ಲಸಿಕೆ ನೀಡಲಾಗುವುದು ಎಂದಿದ್ದಾರೆ. ಇದಕ್ಕೆ ಪೂರ್ವಭಾವಿಯಾಗಿ ಸಂಗ್ರಹ ವ್ಯವಸ್ಥೆ ಪರಿಶೀಲಿಸಲಾಗಿದೆ ಎಂದರು.

ಬೆಂಗಳೂರು, ಬೆಳಗಾವಿಯಲ್ಲಿ ಪ್ರಮುಖವಾಗಿ ಲಸಿಕೆ ಸಂಗ್ರಹ ಮಾಡಲಾಗುವುದು. ಇದಲ್ಲದೆ ಚಿತ್ರದುರ್ಗ, ಕಲಬುರಗಿ, ದಕ್ಷಿಣ ಕನ್ನಡ, ಮೈಸೂರು ಮತ್ತು ಬಾಗಲಕೋಟೆಗಳಲ್ಲಿ 5 ಪ್ರಾದೇಶಿಕ ಸಂಗ್ರಹ ವ್ಯವಸ್ಥೆಗಳಿವೆ. ಪ್ರತಿ ಜಿಲ್ಲೆಯಲ್ಲೂ ಒಂದು ಕಾರ್ಪೊರೇಷನ್ ಲಸಿಕೆ ಸಂಗ್ರಹ ವ್ಯವಸ್ಥೆ ಇದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಒಟ್ಟು 50 ಬ್ಲಾಕ್ ಇವೆ. ಒಟ್ಟು 2,767 ಕೋಲ್ಡ್ ಚೇನ್ ಪಾಯಿಂಟ್‌ಗಳಿವೆ ಎಂದು ತಿಳಿಸಿದರು.

ರಾಜ್ಯದಲ್ಲಿ 900 ಲಸಿಕೆ ಕ್ಯಾರಿಯರ್‌ಗಳಿವೆ.



ಆನಂದರಾವ್ ವೃತ್ತದಲ್ಲಿರುವ ಆರೋಗ್ಯ ಕೇಂದ್ರದಲ್ಲಿ ಲಸಿಕೆ ಸಂಗ್ರಹ ವ್ಯವಸ್ಥೆ ಸಿದ್ಧತೆಯನ್ನು ಸುಧಾಕರ್ ಪರಿಶೀಲಿಸಿದರು.

ಲಸಿಕೆಯನ್ನು ಮೊದಲಿಗೆ ಪ್ರಾದೇಶಿಕ ಸಂಗ್ರಹ ಕೇಂದ್ರಗಳಿಗೆ ಕಳುಹಿಸಲಾಗುತ್ತದೆ. ನಂತರ ಅಲ್ಲಿಂದ ಜಿಲ್ಲಾ ಮಟ್ಟಕ್ಕೆ ಕಳುಹಿಸಲಾಗುತ್ತದೆ. ಬೆಂಗಳೂರಿನಲ್ಲಿ ಎರಡು ವಾಕ್-ಇನ್ ಕೂಲರ್ ಇವೆ. ಒಂದರಲ್ಲಿ 45 ಲಕ್ಷ ಡೋಸ್ ಸಂಗ್ರಹಿಸಲು ಅವಕಾಶವಿದೆ. ಇದೇ ರೀತಿ ಒಂದು ವಾಕ್-ಇನ್ ಫ್ರೀಜರ್ ಇದೆ. ಅದರಲ್ಲಿ 40 ಲಕ್ಷ ಡೋಸ್ ಸಂಗ್ರಹ ಸಾಮರ್ಥ್ಯವಿದೆ. ಕೇಂದ್ರ ಸರ್ಕಾರ ಇನ್ನೂ ಒಂದು ವಾಕ್-ಇನ್ ಫ್ರೀಜರ್ ನೀಡಲಿದೆ ಎಂದರು.

ಆರೋಗ್ಯ ಕಾರ್ಯಕರ್ತರಿಗೆ ಮೊದಲಿಗೆ ಲಸಿಕೆ ನೀಡಲಾಗುವುದು. ಸಾರ್ವಜನಿಕರಿಗೆ 2 ತಿಂಗಳ ಬಳಿಕ ಲಭಿಸಬಹುದು. ಎಲ್ಲರಿಗೂ ಲಸಿಕೆ ಬೇಕೆ- ಬೇಡವೇ ಎಂಬುದನ್ನು ತಜ್ಞರ ಸಲಹೆ ಮೇರೆಗೆ ನಿರ್ಧರಿಸಲಾಗುವುದು. ಸಾರ್ವಜನಿಕರಲ್ಲಿ ಮೊದಲಿಗೆ ವೃದ್ಧರು, ಅಶಕ್ತರಿಗೆ ಲಸಿಕೆ ಸಿಗಲಿದೆ ಎಂದು ಮಾಹಿತಿ ನೀಡಿದರು.

### ಸಚಿವರು ಹೇಳಿದ ಇತರೆ ಪ್ರಮುಖ ಅಂಶಗಳು

- ವಿಮಾನ ನಿಲ್ದಾಣಕ್ಕೆ ಬರುವ ಪ್ರಯಾಣಿಕರ ಮಾಹಿತಿಯನ್ನು ಸಮರ್ಪಕವಾಗಿ ಕಲೆಹಾಕಿ ಆರೋಗ್ಯದ ಮೇಲೆ ನಿಗಾ ಇರಿಸಲಾಗುತ್ತಿದೆ.
- ಯು.ಕೆ.ಯಿಂದ ಬಂದ ವಿಮಾನದಲ್ಲಿ ಒಟ್ಟು 289 ಮಂದಿ ಇದ್ದರು. ಎಲ್ಲರ ಮಾದರಿ ಪಡೆದು ಪರೀಕ್ಷೆ ಮಾಡಿದ್ದು, ನಾಲ್ಕು ಮಂದಿಗೆ ಕರೊನಾ ಸೋಂಕು ಬಂದಿದೆ. ಯಾರು ರೋಗಿ ಎಂದು ನಿಖರವಾಗಿ ಪತ್ತೆ ಮಾಡಿ ಆಸ್ಪತ್ರೆಗೆ ದಾಖಲಿಸಲಾಗುವುದು.

## ವ್ಯಾಕ್ಸಿನ್ ಹೆಸರಲ್ಲೂ ವಂಚನೆ

**ಬೆಂಗಳೂರು:** ಕರೊನಾ ಲಸಿಕೆ ಹೆಸರಿನಲ್ಲೂ ವಂಚನೆ ಮಾಡುವ ಜಾಲ ಸದ್ದಿಲ್ಲದೆ ದೇಶಾದ್ಯಂತ ಕಾರ್ಯಾಚರಿಸುತ್ತಿದೆ. ಹಿರಿಯ ನಾಗರಿಕರನ್ನೇ ಟಾರ್ಗೆಟ್ ಮಾಡುತ್ತಿರುವ ಆರೋಪಿಗಳು ಅವರಿಗೆ ಕರೆ ಮಾಡಿ, ನಾವು ಡ್ರಗ್ ಅಥಾರಿಟಿ ಆಫ್ ಇಂಡಿಯಾದಿಂದ ಕರೆ ಮಾಡುತ್ತಿದ್ದೇವೆ. ನಿಮಗೆ ನೀಡಬೇಕಿರುವ ವ್ಯಾಕ್ಸಿನ್ ಸಿದ್ಧವಾಗಿದೆ. ಇದನ್ನು ಪಡೆಯಲು ನಿಮ್ಮ ಕೆಲ ಮಾಹಿತಿ ನೀಡಬೇಕಾಗುತ್ತದೆ ಎಂದು ನಂಬಿಸುತ್ತಾರೆ. ಇವರ ಮಾತಿಗೆ ಮರುಳಾಗಿ ಆಧಾರ್ ಕಾರ್ಡ್ ಮತ್ತಿತರ ಮಾಹಿತಿ ನೀಡಿದರೆ, 'ನಿಮ್ಮ ಮೊಬೈಲ್‌ಗೆ ಬಂದಿರುವ ಒಟಿಪಿ ತಿಳಿಸಿ' ಎಂದು ಸೂಚಿಸುತ್ತಾರೆ. ನಂತರ ನಿಮ್ಮ ಬ್ಯಾಂಕ್ ಖಾತೆಯಲ್ಲಿರುವ ಹಣವನ್ನು ಲಪಟಾಯಿಸುತ್ತಾರೆ. ಇತ್ತೀಚೆಗೆ ಹಿರಿಯ ನಾಗರಿಕರೊಬ್ಬರ ಖಾತೆಯಿಂದ 12 ಲಕ್ಷ ರೂ. ಲಪಟಾಯಿಸಿದ್ದಾರೆ. ನಿಯಮದ ಪ್ರಕಾರ ಕರೊನಾ ಲಸಿಕೆ ವಿತರಣೆ ಬಗ್ಗೆ ಯಾರೂ ಕರೆ ಮಾಡಿ ವಿವರ ಕೇಳುವುದಿಲ್ಲ. ಜನರು ಎಚ್ಚರಿಕೆಯಿಂದ ಇರಬೇಕು ಎಂದು ಪೊಲೀಸರು ಸಲಹೆ ನೀಡಿದ್ದಾರೆ.